All India Radio: Bangalore
National Bulletin In Kannada
17.12.2025  7.35 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
17.12.2025  7.35 am

**<>><><*><><<>**

ಮುಖ್ಯಾಂಶಗಳು

**೧. ಪ್ರಧಾನಿ ನರೇಂದ್ರ ಮೋದಿ, ಇಥಿಯೋಪಿಯಾ ಪ್ರಧಾನಿ ದ್ವಿಪಕ್ಷೀಯ ಮಾತುಕತೆ; ಉಭಯ ರಾಷ್ಟ್ರಗಳ ಐತಿಹಾಸಿಕ ಸಂಬಂಧ, ಕಾರ್ಯತಂತ್ರದ ಪಾಲುದಾರಿಕೆಗೆ ಉನ್ನತೀಕರಣ**

**೨. ರಾಷ್ಟ್ರಪತಿ ದ್ರೌಪದಿ ಮುರ್ಮು ದಕ್ಷಿಣ ರಾಜ್ಯಗಳ ಪ್ರವಾಸ; ಇಂದು ತಮಿಳುನಾಡಿನ ವೆಲ್ಲೂರಿಗೆ ಭೇಟಿ**

**೩. ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಭೇಟಿ; ವಿವಿಧ ಕ್ಷೇತ್ರಗಳಲ್ಲಿ ಸಹಕಾರ ಕುರಿತು ಚರ್ಚೆ**

**೪. ರಾಷ್ಟ್ರ ರಾಜಧಾನಿಯಲ್ಲಿ ವಾಯು ಮಾಲಿನ್ಯದ ಸಮಸ್ಯೆಯನ್ನು ನಿಭಾಯಿಸಲು ದೆಹಲಿ ಸರ್ಕಾರದಿಂದ ಕಠಿಣ ಕ್ರಮ**

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಅವರು ಅಡಿಸ್ ಅಬಾಬಾದಲ್ಲಿ ಇಥಿಯೋಪಿಯ ಪ್ರಧಾನಿ ಅಬಿಯ್ ಅಹ್ಮದ್ ಅಲಿ ಅವರೊಂದಿಗೆ ವ್ಯಾಪಕ ಮಾತುಕತೆ ನಡೆಸುವ ಮೂಲಕ ಭಾರತ ಮತ್ತು ಇಥಿಯೋಪಿಯಾ ತಮ್ಮ ಐತಿಹಾಸಿಕ ಸಂಬಂಧಗಳನ್ನು ಕಾರ್ಯತಂತ್ರದ ಪಾಲುದಾರಿಕೆಗೆ ಉನ್ನತೀಕರಿಸಿವೆ. ಇಬ್ಬರೂ ನಾಯಕರು ದ್ವಿಪಕ್ಷೀಯ ಮತ್ತು ಪರಸ್ಪರ ಹಿತಾಸಕ್ತಿಯ ವಿಷಯಗಳ ಬಗ್ಗೆ ಚರ್ಚಿಸಿದರು. ನಿಯೋಗ ಮಟ್ಟದ ಮಾತುಕತೆಯ ಸಮಯದಲ್ಲಿ, ಭಾರತ ಮತ್ತು ಇಥಿಯೋಪಿಯಾ ಸಂಬಂಧಗಳನ್ನು ಕಾರ್ಯತಂತ್ರದ ಪಾಲುದಾರಿಕೆಗೆ ಏರಿಸುವುದು ಉಭಯ ರಾಷ್ಟ್ರಗಳ ಸಂಬಂಧಗಳಿಗೆ ಹೊಸ ಶಕ್ತಿ, ಹೊಸ ಆವೇಗ ಮತ್ತು ಹೊಸ ಆಳವನ್ನು ಒದಗಿಸುತ್ತದೆ ಎಂದು ಪ್ರಧಾನಿ ಹೇಳಿದ್ದಾರೆ.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ (  ೨೭ ಸೆಕೆಂಡ್ಸ್ )**

'ಕಾರ್ಯತಂತ್ರದ ಪಾಲುದಾರಿಕೆ'ಗೆ ಸಂಬಂಧಗಳನ್ನು ನವೀಕರಿಸುವುದು, ಕಸ್ಟಮ್ಸ್ ಸಹಕಾರ, ಇಥಿಯೋಪಿಯ ವಿದೇಶಾಂಗ ಸಚಿವಾಲಯದಲ್ಲಿ ದತ್ತಾಂಶ ಕೇಂದ್ರವನ್ನು ಸ್ಥಾಪಿಸುವುದು, ವಿಶ್ವಸಂಸ್ಥೆ ಶಾಂತಿಪಾಲನಾ ತರಬೇತಿ ಸಹಕಾರ, ಜಿ-೨೦ ಅಡಿಯಲ್ಲಿ ಸಾಲ ಪುನರ್ರಚನೆ, ಹೆಚ್ಚಿನ ಐಸಿಸಿಆರ್ ವಿದ್ಯಾರ್ಥಿವೇತನಗಳು ಮತ್ತು ಇಥಿಯೋಪಿಯನ್ನರಿಗೆ ಎಐ ಕಿರು ಕೋರ್ಸ್‌ಗಳು ಸೇರಿದಂತೆ ಎಂಟು ಒಪ್ಪಂದಗಳಿಗೆ ಎರಡೂ ದೇಶಗಳು ಸಹಿ ಹಾಕಿವೆ. ಪ್ರಧಾನಿ ನರೇಂದ್ರ ಮೋದಿ ಅವರಿಗೆ ಇಥಿಯೋಪಿಯಾದ ಅತ್ಯುನ್ನತ ಪ್ರಶಸ್ತಿ 'ದಿ ಗ್ರೇಟ್ ಆನರ್ ನಿಶಾನ್ ಆಫ್ ಇಥಿಯೋಪಿಯಾ' ಪ್ರಶಸ್ತಿಯನ್ನು ಅಲ್ಲಿನ ಪ್ರಧಾನಿ ಡಾ.ಅಬಿಯ್ ಅಹ್ಮದ್ ಅಲಿ ಪ್ರದಾನ ಮಾಡಿದರು. ಭಾರತದೊಂದಿಗೆ ಐತಿಹಾಸಿಕ ಸಂಬಂಧಗಳನ್ನು ಹಂಚಿಕೊಳ್ಳುವ ಇಥಿಯೋಪಿಯಾಗೆ ಪ್ರಧಾನಿ ಎರಡು ದಿನಗಳ ಭೇಟಿಯಲ್ಲಿದ್ದಾರೆ. ಭಾರತ-ಇಥಿಯೋಪಿಯಾ ಪಾಲುದಾರಿಕೆಯನ್ನು ಬಲಪಡಿಸುವಲ್ಲಿ ಅವರ ಅಸಾಧಾರಣ ಕೊಡುಗೆ ಮತ್ತು ಜಾಗತಿಕ ರಾಜನೀತಿಜ್ಞರಾಗಿ ಅವರ ದೂರದೃಷ್ಟಿಯ ನಾಯಕತ್ವಕ್ಕಾಗಿ ಇಥಿಯೋಪಿಯಾದ ರಾಜಧಾನಿ ಅಡಿಸ್ ಅಬಾಬಾದಲ್ಲಿರುವ ಅಡಿಸ್ ಅಂತಾರಾಷ್ಟ್ರೀಯ ಸಮಾವೇಶ ಕೇಂದ್ರದಲ್ಲಿ ಆಯೋಜಿಸಲಾದ ವಿಶೇಷ ಸಮಾರಂಭದಲ್ಲಿ ಈ ಪ್ರಶಸ್ತಿಯನ್ನು ಪ್ರಧಾನಿ ಅವರಿಗೆ ಪ್ರದಾನ ಮಾಡಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ದಶಕಗಳಿಂದ ದ್ವಿಪಕ್ಷೀಯ ಸಂಬಂಧಗಳನ್ನು ಪೋಷಿಸಿದ ಭಾರತ ಮತ್ತು ಇಥಿಯೋಪಿಯ ಜನರಿಗೆ ಈ ಪ್ರಶಸ್ತಿಯನ್ನು ಅರ್ಪಿಸಿದರು ಮತ್ತು ಈ ಗೌರವವನ್ನು ಪಡೆದಿದ್ದಕ್ಕಾಗಿ ೧.೪ ಶತಕೋಟಿ ಭಾರತೀಯರ ಪರವಾಗಿ ಹೃತ್ಪೂರ್ವಕ ಕೃತಜ್ಞತೆಯನ್ನು ವ್ಯಕ್ತಪಡಿಸಿದರು. ಪ್ರಧಾನಮಂತ್ರಿಯವರು ಇಂದು ಇಥಿಯೋಪಿಯಾದ ಸಂಸತ್ತಿನ ಅಧಿವೇಶನವನ್ನುದ್ದೇಶಿಸಿ ಮಾತನಾಡಲಿದ್ದಾರೆ. ಜೋರ್ಡಾನ್ ಮತ್ತು ಇಥಿಯೋಪಿಯಾ ಭೇಟಿಯನ್ನು ಮುಗಿಸಿದ ನಂತರ ಪ್ರಧಾನಿ ನರೇಂದ್ರ ಮೋದಿ ತಮ್ಮ ಮೂರು ರಾಷ್ಟ್ರಗಳ ಪ್ರವಾಸದ ಕೊನೆಯ ಚರಣದಲ್ಲಿ ಇಂದು ಸಂಜೆ ಒಮಾನ್‌ಗೆ ತೆರಳಲಿದ್ದಾರೆ. ಒಮಾನ್ ಅಧ್ಯಕ್ಷ ಸುಲ್ತಾನ್ ಹೈಥಮ್ ಬಿನ್ ತಾರಿಕ್ ಅವರ ಆಹ್ವಾನದ ಮೇರೆಗೆ ಪ್ರಧಾನಿ ನರೇಂದ್ರ ಮೋದಿ ಒಮಾನ್‌ಗೆ ಭೇಟಿ ನೀಡುತ್ತಿದ್ದಾರೆ. ಪ್ರಧಾನಿ ಅವರೊಂದಿಗೆ ಉನ್ನತ ಮಟ್ಟದ ನಿಯೋಗವೂ ಇರಲಿದೆ. ಎರಡು ದಿನಗಳ ಭೇಟಿಯ ಸಂದರ್ಭದಲ್ಲಿ ಭಾರತ ಮತ್ತು ಒಮಾನ್ ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದ-ಸಿಇಪಿಎಗೆ ಸಹಿ ಹಾಕಲಾಗುವ ಸಾಧ್ಯತೆಯಿದೆ.

<>><><*><><<>

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ತಮಿಳುನಾಡಿನ ವೆಲ್ಲೂರಿಗೆ ಭೇಟಿ ನೀಡಲಿದ್ದಾರೆ. ಅವರು ಶ್ರೀಪುರಂ ಸುವರ್ಣ ದೇವಾಲಯದಲ್ಲಿ ದರ್ಶನ ಪಡೆದು ಮತ್ತು ಆರತಿ ಮಾಡಲಿದ್ದಾರೆ. ಇದೇ ವೇಳೆ ರಾಷ್ಟ್ರಪತಿಗಳು ಧ್ಯಾನ ಮಂಟಪವನ್ನು ಉದ್ಘಾಟಿಸಲಿದ್ದು, ದೇವಾಲಯ ಸಂಕೀರ್ಣದಲ್ಲಿ

ಗಿಡವೊಂದನ್ನು ನೆಡಲಿದ್ದಾರೆ. ತಮಿಳುನಾಡು ರಾಜ್ಯಪಾಲ ಆರ್.ಎನ್.ರವಿ ಮತ್ತು ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ. ಎಲ್. ಮುರುಗನ್ ಅವರು ವೆಲ್ಲೂರಿನಲ್ಲಿ ರಾಷ್ಟ್ರಪತಿಗಳನ್ನು ಸ್ವಾಗತಿಸಲಿದ್ದಾರೆ. ನಿನ್ನೆಯಿಂದ ೨೨ ರವರೆಗೆ ಕರ್ನಾಟಕ, ತಮಿಳುನಾಡು ಮತ್ತು ತೆಲಂಗಾಣ ಸೇರಿದಂತೆ ದಕ್ಷಿಣ ರಾಜ್ಯಗಳಿಗೆ ಅವರ ಒಂದು ವಾರದ ಪ್ರವಾಸದ ಭಾಗವಾಗಿ ನೀಡುತ್ತಿರುವ ಭೇಟಿ ಇದಾಗಿದೆ. ರಾಷ್ಟ್ರಪತಿ, ಇಂದು ಮಧ್ಯಾಹ್ನ ಸಿಕಂದರಾಬಾದ್‌ನ ಬೊಲಾರಂನಲ್ಲಿರುವ ರಾಷ್ಟ್ರಪತಿ ನಿಲಯಕ್ಕೆ ಆಗಮಿಸಲಿದ್ದಾರೆ. ೬ ದಿನಗಳ ವಾಸ್ತವ್ಯಕ್ಕಾಗಿ ರಾಜ್ಯ ಅಧಿಕಾರಿಗಳು ಇಲ್ಲಿ ಎಲ್ಲಾ ವ್ಯವಸ್ಥೆಗಳನ್ನು ಮಾಡಿದ್ದಾರೆ. ರಾಷ್ಟ್ರಪತಿಗಳು ಇದೇ ೧೯ ರಂದು ರಾಜ್ಯ ಸಾರ್ವಜನಿಕ ಸೇವಾ ಆಯೋಗಗಳ ಅಧ್ಯಕ್ಷರಿಗಾಗಿ ರಾಷ್ಟ್ರೀಯ ಸಮ್ಮೇಳನವನ್ನು ಉದ್ಘಾಟಿಸಲಿದ್ದಾರೆ ಮತ್ತು ಇದೇ ೨೦ ರಂದು ಗಚಿಬೌಲಿಯಲ್ಲಿ ಬ್ರಹ್ಮ ಕುಮಾರಿಯರು ಆಯೋಜಿಸಿರುವ 'ಭಾರತದ ಕಾಲಾತೀತ ಜ್ಞಾನ - ಶಾಂತಿ ಮತ್ತು ಪ್ರಗತಿಯ ಹಾದಿಗಳು ಎಂಬ ವಿಷಯದ ಕುರಿತ ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ. ಈ ನಡುವೆ, ರಾಷ್ಟ್ರಪತಿಗಳ ಭೇಟಿಯ ಹಿನ್ನೆಲೆಯಲ್ಲಿ ಅಲ್ವಾಲ್ ಮತ್ತು ಗಚಿಬೌಲಿ ಪೊಲೀಸ್ ಠಾಣೆ ಪ್ರದೇಶಗಳಲ್ಲಿ ರಿಮೋಟ್ ನಿಯಂತ್ರಿತ ಡ್ರೋನ್‌ಗಳು, ಪ್ಯಾರಾಗ್ಲೈಡರ್‌ಗಳು ಮತ್ತು ಮೈಕ್ರೋ ಲೈಟ್ ವಿಮಾನಗಳ ಕಾರ್ಯಾಚರಣೆಯನ್ನು ಹೈದರಾಬಾದ್ ಮತ್ತು ಸೈಬರಾಬಾದ್ ಪೊಲೀಸ್ ಆಯುಕ್ತಾಲಯಗಳು ನಿಷೇಧಿಸಿವೆ.

<>><><*><><<>

ಬಿಜೆಪಿಯ ರಾಷ್ಟ್ರೀಯ ಕಾರ್ಯಕಾರಿ ಅಧ್ಯಕ್ಷ ನಿತಿನ್ ನಬಿನ್ ನಿನ್ನೆ ನವದೆಹಲಿಯಲ್ಲಿ ಕೇಂದ್ರ ಸಚಿವರು ಮತ್ತು ಪಕ್ಷದ ಹಿರಿಯ ನಾಯಕರನ್ನು ಭೇಟಿಯಾದರು. ಅವರು ಪಕ್ಷದ ಹಿರಿಯ ಸಚಿವ ಲಾಲ್ ಕೃಷ್ಣ ಅಡ್ವಾಣಿ, ಕೇಂದ್ರ ಸಚಿವರು ಮತ್ತು ಪಕ್ಷದ ಹಿರಿಯ ನಾಯಕರಾದ ಅಮಿತ್ ಶಾ, ನಿತಿನ್ ಗಡ್ಕರಿ ಮತ್ತು ಭೂಪೇಂದರ್ ಯಾದವ್ ಅವರನ್ನು ಭೇಟಿ ಮಾಡಿದರು.

<>><><*><><<>

ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು ನಿನ್ನೆ ಜೆರುಸಲೆಮ್‌ನಲ್ಲಿ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರನ್ನು ಭೇಟಿ ಮಾಡಿ, ಭಾರತ-ಇಸ್ರೇಲ್ ಕಾರ್ಯತಂತ್ರದ ಪಾಲುದಾರಿಕೆಯ ಸಾಮರ್ಥ್ಯವನ್ನು ಪುನರುಚ್ಚರಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಸಚಿವರು, ತಂತ್ರಜ್ಞಾನ, ಆರ್ಥಿಕತೆ, ಕೌಶಲ್ಯ ಮತ್ತು ಪ್ರತಿಭೆ, ಸಂಪರ್ಕ ಮತ್ತು ಭದ್ರತೆಯಲ್ಲಿ ಆಳವಾದ ಸಹಕಾರದ ಕುರಿತು ಉಭಯ ನಾಯಕರು ಚರ್ಚಿಸಿರುವುದಾಗಿ ತಿಳಿಸಿದ್ದಾರೆ. ಪ್ರಾದೇಶಿಕ ಮತ್ತು ಜಾಗತಿಕ ಬೆಳವಣಿಗೆಗಳ ಕುರಿತು ಪ್ರಧಾನಿ ನೆತನ್ಯಾಹು ಅವರ

ದೃಷ್ಟಿಕೋನಗಳನ್ನು ಗೌರವಿಸುವುದಾಗಿ ಅವರು ಹೇಳಿದ್ದಾರೆ. ಸಚಿವ ಡಾ.ಎಸ್.ಜೈಶಂಕರ್, ಇಸ್ರೇಲ್‌ನ ಆರ್ಥಿಕ ಮತ್ತು ಕೈಗಾರಿಕಾ ಸಚಿವ ನಿರ್ ಬರ್ಕತ್ ಅವರೊಂದಿಗೆ ಸಭೆ ನಡೆಸಿದರು. ಈ ವೇಳೆ, ಎರಡೂ ದೇಶಗಳ ನಡುವೆ ಹೂಡಿಕೆ ಮತ್ತು ನಾವೀನ್ಯತೆ ಸಹಕಾರವನ್ನು ವಿಸ್ತರಿಸುವ ಬಗ್ಗೆ ಚರ್ಚಿಸಲಾಯಿತು. ಆರ್ಥಿಕ ಪಾಲುದಾರಿಕೆಯನ್ನು ಮತ್ತಷ್ಟು ಹೆಚ್ಚಿಸಲು ಭಾರತ - ಇಸ್ರೇಲ್ ಮುಕ್ತ ವ್ಯಾಪಾರ ಒಪ್ಪಂದದ ಆರಂಭಿಕ ತೀರ್ಮಾನದ ಬಗ್ಗೆಯೂ ಉಭಯ ನಾಯಕರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

<>><><*><><<>

ರಾಷ್ಟ್ರ ರಾಜಧಾನಿಯಲ್ಲಿ ವಾಯು ಮಾಲಿನ್ಯದ ಸಮಸ್ಯೆಯನ್ನು ನಿಭಾಯಿಸಲು ದೆಹಲಿ ಸರ್ಕಾರ ಕಠಿಣ ಕ್ರಮಗಳನ್ನು ತೆಗೆದುಕೊಂಡಿದೆ. ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿರುವ ದೆಹಲಿ ಪರಿಸರ ಸಚಿವ ಮಂಜಿಂದರ್ ಸಿಂಗ್ ಸಿರ್ಸಾ, ನಾಳೆಯಿಂದ ಪೆಟ್ರೋಲ್ ಪಂಪ್‌ಗಳಲ್ಲಿ ಸರಿಯಾದ ಮಾಲಿನ್ಯ ನಿಯಂತ್ರಣ - ಪಿಯುಸಿ, ಪ್ರಮಾಣಪತ್ರವಿಲ್ಲದ ವಾಹನಗಳಿಗೆ ಇಂಧನ ನೀಡಲಾಗುವುದಿಲ್ಲ ಎಂದು ಹೇಳಿದರು. ದೆಹಲಿಯಲ್ಲಿ ನಿರ್ಮಾಣ ಸಾಮಗ್ರಿಗಳನ್ನು ತರುವ ಟ್ರಕ್‌ಗಳ ಮೇಲೆ ಸಂಪೂರ್ಣ ನಿಷೇಧ ಹೇರಲಾಗುವುದು ಎಂದು ಸಚಿವರು ಘೋಷಿಸಿದರು. ಇದಲ್ಲದೆ, ಬಿಎಸ್೬ ಕ್ಕಿಂತ ಕಡಿಮೆ ವರ್ಗವನ್ನು ಹೊಂದಿರುವ ದೆಹಲಿಯ ಹೊರಗಿನ ಖಾಸಗಿ ವಾಹನಗಳನ್ನು ನಾಳೆಯಿಂದ ರಾಷ್ಟ್ರ ರಾಜಧಾನಿಗೆ ಪ್ರವೇಶಿಸಲು ಅನುಮತಿಸಲಾಗುವುದಿಲ್ಲ. ಯಾವುದೇ ಸರ್ಕಾರವು ೯-೧೦ ತಿಂಗಳುಗಳಲ್ಲಿ ಮಾಲಿನ್ಯವನ್ನು ಸಂಪೂರ್ಣವಾಗಿ ತೊಡೆದುಹಾಕಲು ಸಾಧ್ಯವಿಲ್ಲ. ಹಿಂದಿನ ಸರ್ಕಾರವು ತನ್ನ ಅಧಿಕಾರಾವಧಿಯಲ್ಲಿ ಯಾವುದೇ ದೃಢ ಕ್ರಮಕೈಗೊಳ್ಳಲಿಲ್ಲ. ಪ್ರಸ್ತುತ ಸರ್ಕಾರವು ಹದಗೆಟ್ಟ ಪರಿಸ್ಥಿತಿಗಳನ್ನು ಸುಧಾರಿಸಿದೆ ಮತ್ತು ವಾಯು ಗುಣಮಟ್ಟ ಸೂಚ್ಯಂಕವನ್ನು ಕಡಿಮೆ ಮಾಡಲು ನಿರಂತರವಾಗಿ ಕೆಲಸ ಮಾಡುತ್ತಿದೆ ಎಂದು ಅವರು ತಿಳಿಸಿದರು.

<>><><*><><<>

ಅಫ್ಘಾನಿಸ್ತಾನದ ಸಾರ್ವಜನಿಕ ಆರೋಗ್ಯ ಸಚಿವ, ಮೌಲವಿ ನೂರ್ ಜಲಾಲ್ ಜಲಾಲಿ ಅವರು, ಆರೋಗ್ಯ ಕ್ಷೇತ್ರದಲ್ಲಿ ದ್ವಿಪಕ್ಷೀಯ ಸಹಕಾರವನ್ನು ಹೆಚ್ಚಿಸುವ ಉದ್ದೇಶದಿಂದ ಭಾರತಕ್ಕೆ ತಮ್ಮ ಮೊದಲ ಅಧಿಕೃತ ಭೇಟಿಗಾಗಿ ನಿನ್ನೆ ನವದೆಹಲಿಗೆ ಆಗಮಿಸಿದರು. ಅಫ್ಘಾನ್ ಆರೋಗ್ಯ ಸಚಿವರ ಆಗಮನಕ್ಕೆ ಆತ್ಮೀಯ ಸ್ವಾಗತವನ್ನು ವ್ಯಕ್ತಪಡಿಸಿದ ವಿದೇಶಾಂಗ ಸಚಿವಾಲಯ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಈ ಭೇಟಿಯು ಅಫ್ಘಾನಿಸ್ತಾನದ ಆರೋಗ್ಯ ವ್ಯವಸ್ಥೆಗೆ ಭಾರತದ ನಿರಂತರ ಬೆಂಬಲವನ್ನು ಪ್ರತಿಬಿಂಬಿಸುತ್ತದೆ ಮತ್ತು ಉತ್ಪಾದಕ ಚರ್ಚೆಗಳನ್ನು ಎದುರು ನೋಡುತ್ತಿರುವುದಾಗಿ ತಿಳಿಸಿದೆ. ಭಾರತವು ಅಫ್ಘಾನಿಸ್ತಾನದ ಆರೋಗ್ಯ ಮೂಲಸೌಕರ್ಯಕ್ಕೆ ಕೊಡುಗೆ ನೀಡಿದೆ, ಅಫ್ಘಾನ್

ಜನರಿಗೆ ತನ್ನ ದೃಢವಾದ ಬೆಂಬಲವನ್ನು ಪುನರುಚ್ಚರಿಸಿದೆ ಎಂದು ತಿಳಿಸಿದೆ. ಈ ತಿಂಗಳ ಆರಂಭದಲ್ಲಿ, ಭಾರತವು ಕಾಬೂಲ್‌ಗೆ ೬೩ ಸಾವಿರದ ೭೩೪  ಡೋಸ್ ಇನ್ಫ್ಲುಯೆನ್ಸ ಮತ್ತು ಮೆನಿಂಜೈಟಿಸ್ ಲಸಿಕೆಗಳನ್ನು ತಲುಪಿಸಿದೆ. ನವೆಂಬರ್ ೨೮ ರಂದು, ಆರೋಗ್ಯ ಅಗತ್ಯಗಳನ್ನು ಪೂರೈಸಲು ಭಾರತವು ೭೩ ಟನ್ ಜೀವರಕ್ಷಕ ಔಷಧಿಗಳು, ಲಸಿಕೆಗಳು ಮತ್ತು ಅಗತ್ಯ ಪೂರಕಗಳನ್ನು ಅಫ್ಘಾನಿಸ್ತಾನಕ್ಕೆ ತಲುಪಿಸಿದೆ. ಇದು ಅಫ್ಘಾನಿಸ್ತಾನದಿಂದ ಭಾರತಕ್ಕೆ ಮೂರನೇ ಸಚಿವ ಮಟ್ಟದ ಭೇಟಿಯಾಗಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>**